# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗಚಗೆರೆ ಗ್ರಾಮ ಪಂಚಾಯತಿ, ಚನ್ನಪಟ್ಟಣ ತಾಲ್ಲೂಕು ರಾಮನಗರ ಮತ್ತು ಶ್ರೀ ರೆಡ್ಡೆಪ್ಪ ಕಾರ್ಯನಿರ್ವಾಹಕ ಅಧಿಕಾರಿ, ಚನ್ನಪಟ್ಟಣ ತಾಲ್ಲೂಕು ಪಂಚಾಯತಿ, ಚನ್ನಪಟ್ಟಣ, ರಾಮನಗರ ಜಿಲ್ಲೆ ಇವರುಗಳ ವಿರುದ್ಧ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:-ಮಾನ್ಯ ಉಪ ಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ.12(3)ರಡಿ ಸಲ್ಲಿಸಿರುವ ವರದಿ ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ-43175/2015/ಡಿಆರ್‌ಇ-5,.ದಿ:20-05-2017.

-000-

ಪ್ರಸ್ತಾವನೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ದಿ:02-06-2017ರ ಅರೆ ಸರ್ಕಾರಿ ಪತ್ರದ ಜೊತೆ ಮಾನ್ಯ ಉಪ ಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ-12(3) ಅಡಿ ದಿನಾಂಕ:20.05.2017 ರಂದು ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ನು ಸಲ್ಲಿಸಿರುತ್ತಾರೆ.

ಸದರಿ ವರದಿಯಲ್ಲಿ ಶ್ರೀ ರಾಜೇಶ ತಂದೆ ತಿಮ್ಮೇಗೌಡ, ಬ್ರಹ್ಮಣೀಪುರ ಗ್ರಾಮ, ಕಸಬಾ ಹೋಬಳಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ ರವರು ತಮ್ಮ ದೂರಿನಲ್ಲಿ (1) ಶ್ರೀ ರಮೇಶ್ ತಹಶೀಲ್ದಾರ್ ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ (2) ಶ್ರೀ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗಚಗೆರೆ ಗ್ರಾಮ ಪಂಚಾಯತಿ, ಚನ್ನಪಟ್ಟಣ ತಾಲ್ಲೂಕು ರಾಮನಗರ ಮತ್ತು (3) ಶ್ರೀ ರೆಡ್ಡೆಪ್ಪ ಕಾರ್ಯನಿರ್ವಾಹಕ ಅಧಿಕಾರಿ, ಚನ್ನಪಟ್ಟಣ ತಾಲ್ಲೂಕು ಪಂಚಾಯತಿ, ಚನ್ನಪಟ್ಟಣ, ರಾಮನಗರ ಜಿಲ್ಲೆ ಇವರುಗಳು ಸರ್ಕಾರಿ / ಸಾರ್ವಜನಿಕ ನೌಕರರಾಗಿದ್ದು, ದುರ್ನಡತೆ / ದುರ್ವರ್ತನೆಯಿಂದ ನಡೆದುಕೊಂಡಿರುವ ಬಗ್ಗೆ ವರದಿಸಿರುತ್ತಾರೆ.

| ಎದುರುದಾರರ ಹೆಸರು ಮತ್ತು ವಿವರ | ಎದುರುದಾರರ ಸಂಖ್ಯೆ |
|---|---|
| 1) ಶ್ರೀ ರಮೇಶ್ ತಹಶೀಲ್ದಾರ್ ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ | 1 |
| 2) ಶ್ರೀ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗಚಗೆರೆ ಗ್ರಾಮ ಪಂಚಾಯತಿ, ಚನ್ನಪಟ್ಟಣ ತಾಲ್ಲೂಕು ರಾಮನಗರ | 2 |
| 3) ಶ್ರೀ ರೆಡ್ಡೆಪ್ಪ ಕಾರ್ಯನಿರ್ವಾಹಕ ಅಧಿಕಾರಿ, ಚನ್ನಪಟ್ಟಣ ತಾಲ್ಲೂಕು ಪಂಚಾಯತಿ, ಚನ್ನಪಟ್ಟಣ, ರಾಮನಗರ ಜಿಲ್ಲೆ | 3 |

ದೂರಿನ ಸಂಕ್ಷಿಪ್ತ ವಿವರಣೆ:-

(ಅ) ತಮ್ಮ ಮನೆಯ ಮುಂದೆ 8 ಅಡಿ ಓಡಾಡುವ ರಸ್ತೆ ಇದ್ದು ಅದನ್ನು ತೆರವುಗೊಳಿಸಿ ರಸ್ತೆ ನಿರ್ಮಾಣ ಮಾಡುವಂತೆ 10 ವರ್ಷಗಳಿಂದ ಹೋರಾಟ ಮಾಡಿಕೊಂಡು ಬಂದಿರುತ್ತೇನೆ. ಆದರೆ ಎದರುದಾರರು ಯಾವುದೇ ಕ್ರಮ ತೆಗೆದುಕೊಂಡಿಲ್ಲ ಅಂತ ವರದಿಸಿರುತ್ತಾರೆ.

(ಆ) ಬಹಳ ದಿನಗಳವರೆಗೆ ಎದರುದಾರರು ತಮ್ಮ ತಕರಾರುಗಳನ್ನು ಸಲ್ಲಿಸಲಿಲ್ಲ. ಅಂತಿಮ ಪರಿಶೀಲನೆಗೆ ತೆಗೆದುಕೊಂಡಾಗ ದಿನಾಂಕ:05.08.2016 ರಂದು 1ನೇ ಎದರುದಾರರು ತಮಗೆ ದೂರಿನ ಪ್ರತಿ ಬಂದಿಲ್ಲ ಅಂತ ತಕರಾರು ತೆಗೆದರು ದಿ:1.02.2016 ರಂದು ಅವರೇ ಅಕ್ಷೇಪಣೆ ಸಲ್ಲಿಸಲು ಸಮಯ ಕೋರಿ ಪತ್ರ ಬರೆದಿದ್ದರು. ಈಗ ನನಗೆ ಪ್ರತಿ ಸಿಕ್ಕಿಲ್ಲ ಅಂತ ವಿವಾದಿಸುವಂತಿಲ್ಲ. ಆದರೂ ಸಹ ಕಾರ್ಯನಿರ್ವಾಹಕ ಅಧಿಕಾರಿಗಳು ಚುನಾವಣೆ ಪ್ರಕ್ರಿಯೆ ನಡೆಯುತ್ತಿದೆ ಅಂತ ತಿಳಿಸಿದ್ದರಿಂದ, 1 ರಿಂದ 3ನೇ ಎದುರುದಾರರಿಗೆ ಖುದ್ದು ಹಾಜರಾಗುವಂತೆ ತಿಳಿಸಲಾಯಿತು. ತಹಶೀಲ್ದಾರ ಚನ್ನಪಟ್ಟಣ ಇವರಿಗೆ ದೂರಿನ ಮೇಲೆ ಸೂಕ್ತ ಕ್ರಮ ಕೈಗೊಂಡು ವರದಿಯನ್ನು ಸಲ್ಲಿಸುವಂತೆ ನಿರ್ದೇಶಿಸಲಾಗಿತ್ತು.

...2

ತಹಶೀಲ್ದಾರರು ತಮ್ಮ ಆಕ್ಷೇಪಣೆ ಸಲ್ಲಿಸಿದ್ದು, ಅದರಲ್ಲಿ ಒತ್ತುವರಿ ತೆರವು ಕಾರ್ಯವು ತಹಶೀಲ್ದಾರರ ವ್ಯಾಪ್ತಿಗೆ ಬರುವುದಿಲ್ಲ, ಕಡಚಗೇರೆ ಗ್ರಾಮ ಪಂಚಾಯತಿಯ ಸರಹದ್ದಿನಲ್ಲಿರುವುದರಿಂದ, ಸಂಬಂಧಪಟ್ಟ ಗ್ರಾಮ ಪಂಚಾಯತಿ ಅಧಿಕಾರಿಗಳು ಕ್ರಮ ತೆಗೆದುಕೊಳ್ಳಬೇಕಾಗಿರುತ್ತದೆ. ಪಂಚಾಯತಿ ಅಧಿಕಾರಿಗಳ ಜೊತೆಗೆ ಸರ್ವೆ ಕಾರ್ಯ ಮತ್ತು ತೆರವು ಕಾರ್ಯಾಚರಣೆ ಪೂರ್ಣಗೊಳಿಸಲಾಗಿರುತ್ತೆ ಅಂತ ತಿಳಿಸಿದ್ದಾರೆ. ದೂರುದಾರರು ಇದಕ್ಕೆ ಪ್ರತ್ಯುತ್ತರ ಸಲ್ಲಿಸಿದ್ದು, ಕೇವಲ ಸರ್ವೆ ಕಾರ್ಯ ಮಾತ್ರ ಆಗಿದೆ. ರಸ್ತೆ ತೆರವು ಆಗಿಲ್ಲ, ಸುಳ್ಳು ವರದಿಯನ್ನು ತಹಶೀಲ್ದಾರರು ಮತ್ತು ಪಂಚಾಯತಿ ಅಧಿಕಾರಿಗಳು ಸಲ್ಲಿಸಿದ್ದಾರೆ. ನನಗೆ ಮತ್ತು ನನ್ನ ಕುಟುಂಬಕ್ಕೆ ಪ್ರಾಣ ಭಯ ಇದೆ. ಆದ್ದರಿಂದ ಸೂಕ್ತವಾದ ಪೊಲೀಸ್ ರಕ್ಷಣೆ ಕೊಡುವಂತೆ ಕೋರಿಕೊಂಡಿದ್ದಾರೆ.

(ಇ) ಈ ಪ್ರಕರಣದ ಸಂಪೂರ್ಣ ಕಡತವನ್ನು ಪರಿಶೀಲಿಸಲಾಗಿ, ಈ ಪ್ರಕರಣದ 2 ಮತ್ತು 3ನೇ ಎದರುದಾರರು ಕೇವಲ ಪ್ರೇಕ್ಷಕರಂತೆ ವರ್ತಿಸುತ್ತಿದ್ದಾರೆ. ದೂರಿಗೆ ಯಾವುದೇ ರೀತಿಯ ಆಕ್ಷೇಪಣೆಗಳನ್ನು ಸಲ್ಲಿಸಿಲ್ಲ. ಚುನಾವಣೆಯ ನೆಪವೊಡ್ಡಿ ಸಮಯವನ್ನು ತೆಗೆದುಕೊಂಡ ನಂತರ ಮುಂದೆ ಏನು ಕ್ರಮ ಕೈಗೊಳ್ಳಲಾಗಿದೆ ಎನ್ನುವ ಬಗ್ಗೆ ತಿಳಿಸಿಲ್ಲ ಅಥವಾ ಏಕೆ ದೂರುದಾರರ ಅರ್ಜಿಗಳನ್ನು ಪರಿಗಣಿಸಿಲ್ಲ ಎನ್ನಲು ಯಾವುದೇ ಆಕ್ಷೇಪಣೆಗಳನ್ನು ಸಲ್ಲಿಸಿಲ್ಲ. ತಾಲ್ಲೂಕ್ ಸರ್ವೆಯರ್ ಚನ್ನಪಟ್ಟಣ ಇವರು ತಯಾರಿಸಿರುವ ನಕ್ಷೆಯಲ್ಲಿ ಸದರಿ 8 ಅಡಿ ರಸ್ತೆಯನ್ನು ಇ.ಎಫ್.ಕೆ.ಜಿ.ಹೆಚ್. ಅಂತ ತೋರಿಸಿದ್ದು, ನಕ್ಷೆ ತಯಾರಿಸಿರುವುದರಿಂದ ಒತ್ತುವರಿ ತೆರವುಗೊಳಿಸಿದಂತೆ ಆಗುವುದಿಲ್ಲ. 1ನೇ ಎದರುದಾರರು ತೆರವು ಕಾರ್ಯಾಚರಣೆಯನ್ನು ಪೂರ್ಣಗೊಳಿಸಲಾಗಿರುತ್ತದೆ ಅಂತ ವರದಿ ಸಲ್ಲಿಸಿದ್ದು ಆದರೆ ಇದರೊಂದಿಗೆ ಯಾವುದೇ ದಾಖಲೆಗಳನ್ನು ಸಲ್ಲಿಸಿಲ್ಲ. ಗ್ರಾಮ ಲೆಕ್ಕಿಗರು ರಾಜಸ್ವ ನಿರೀಕ್ಷಕರ ವರದಿ ಸಲ್ಲಿಸಿದ್ದು, ಸಾರ್ವಜನಿಕರ ಸಮ್ಮುಖದಲ್ಲಿ ತಾಲ್ಲೂಕು ಮೋಜಣಿದಾರರಿಂದ ಅಳತೆ ಮಾಡಿಸಿಕೊಡುವುದಕ್ಕೆ ಕಡತ ರವಾನಿಸಲಾಗಿದೆ ಅಂತ ಮಾತ್ರ ಈ ವರದಿಗಳಲ್ಲಿ ನಮೂದಿಸಲಾಗಿದೆ. ರಸ್ತೆ ತೆರವುಗೊಳಿಸಿದ ಬಗ್ಗೆ ನಮೂದುಗಳು ಇಲ್ಲ. ದೂರುದಾರರು ಮಾಡಿರುವ ಆಪಾದನೆಗಳು ಮೇಲ್ನೋಟಕ್ಕೆ ಸಾಬೀತಾಗಿವೆ. ಜವಬ್ದಾರಿಯುತ ಹುದ್ದೆಯಲ್ಲಿರುವ 3 ಜನ ಎದುರುದಾರರು ಯಾವುದೇ ಕ್ರಮ ತೆಗೆದುಕೊಳ್ಳದೆ ರಸ್ತೆಯನ್ನು ತೆರವುಗೊಳಿಸದೇ ಕರ್ತವ್ಯಲೋಪ ಎಸೆಗಿದ್ದಾರೆ. ದೂರುದಾರರ ಮನೆಯ ಮುಂದೆ ಜೆ.ಸಿ.ಬಿ.ಯಿಂದ ಕೆಂಪು ಮಣ್ಣು ಗುಡ್ಡೆ ಹಾಕಿ ತೊಂದರೆ ಕೊಟ್ಟಿರುವುದು ದೂರುದಾರರು ಹಾಜರುಪಡಿಸಿರುವ ಫೋಟೊಗಳಿಂದ ಕಂಡುಬರುತ್ತದೆ. ಇ.ಎಫ್.ಕೆ.ಜಿ.ಹೆಚ್ ಅಂತ ನಕ್ಷೆಯಲ್ಲಿ ತೋರಿಸಿರುವ ಜಾಗ ಸರ್ವೆ ಮಾಡಿದಾಗ ಖಾಲಿ ಇತ್ತು. ಈಗ ಅಲ್ಲಿಯೇ ಮಣ್ಣುಗುಡ್ಡೆಯನ್ನು ಖಾಸಗಿ ವ್ಯಕ್ತಿಯು ಹಾಕಿದ್ದು ಪಂಚಾಯತಿ ಅಧಿಕಾರಿಗಳಿಗೆ ಅದನ್ನು ತೆರವುಗೊಳಿಸುವ ಅಧಿಕಾರ ಇದ್ದರೂ ಸಹ ಯಾವುದೇ ಕ್ರಮ ತೆಗೆದುಕೊಂಡಿಲ್ಲ ಎಂದು ವರದಿಸಿರುತ್ತಾರೆ.

(ಈ) ಆದುದರಿಂದ 1 ರಿಂದ 3ನೇ ಎದುರುದಾರರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ, ನಿಯಮ 3 (i)(ii) ಮತ್ತು (iii) ರಲ್ಲಿ ಹೇಳಿದಂತೆ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುವುದು ಕಂಡುಬರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3)ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, 1 ರಿಂದ 3ನೇ ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರ ಅಡಿಯಲ್ಲಿ 1 ರಿಂದ 3ನೇ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲು ಕೋರಿರುತ್ತಾರೆ.

(ಉ) ಸದರಿ ಪ್ರಕರಣವನ್ನು ಪರಿಶೀಲಿಸಲಾಗಿ ಮಾನ್ಯ ಉಪಲೋಕಾಯುಕ್ತರ ಕಛೇರಿಯಿಂದ ಶ್ರೀ ರಮೇಶ್ ತಹಶೀಲ್ದಾರ್ ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ

..3

ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವೆ ವನಿಮೆ ನಿಯಮ 1957ರ ನಿಯಮ 14(ಎ)ರಡಿ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲು ಮೂಲ ದಾಖಲೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರಿಗೆ ಕಳುಹಿಸಿರುತ್ತಾರೆ.

2ನೇ ಎದುರುದಾರರಾದ ಶ್ರೀ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗಚಗೆರೆ ಗ್ರಾಮ ಪಂಚಾಯತಿ, ಚನ್ನಪಟ್ಟಣ ತಾಲ್ಲೂಕು ರಾಮನಗರ ಮತ್ತು 3ನೇ ಎದುರುದಾರರಾದ ಶ್ರೀ ರೆಡ್ಡೆಪ್ಪ ಕಾರ್ಯನಿರ್ವಾಹಕ ಅಧಿಕಾರಿ, ಚನ್ನಪಟ್ಟಣ ತಾಲ್ಲೂಕು ಪಂಚಾಯತಿ, ಚನ್ನಪಟ್ಟಣ, ರಾಮನಗರ ಜಿಲ್ಲೆ ಇವರುಗಳು ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಠೆಯನ್ನು ತೋರದೆ, ಕರ್ತವ್ಯಲೋಪವೆಸಗಿ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುತ್ತಾರೆಂದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಉಪ ನಿಯಮ 14(ಎ)ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲು ಮಾನ್ಯ ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 142 ವಿಸೇಬಿ 2017,ಬೆಂಗಳೂರು,ದಿನಾಂಕ:11-07-2017.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ 2ನೇ ಎದುರುದಾರರಾದ ಶ್ರೀ ಉಮೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗಚಗೆರೆ ಗ್ರಾಮ ಪಂಚಾಯತಿ, ಚನ್ನಪಟ್ಟಣ ತಾಲ್ಲೂಕು ರಾಮನಗರ ಮತ್ತು 3ನೇ ಎದುರುದಾರರಾದ ಶ್ರೀ ರೆಡ್ಡೆಪ್ಪ ಕಾರ್ಯನಿರ್ವಾಹಕ ಅಧಿಕಾರಿ, ಚನ್ನಪಟ್ಟಣ ತಾಲ್ಲೂಕು ಪಂಚಾಯತಿ, ಚನ್ನಪಟ್ಟಣ, ರಾಮನಗರ ಜಿಲ್ಲೆ ಇವರುಗಳ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957 ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

11/07/2017

(ಎಸ್ ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ&ಸಿ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

<u>ಇವರಿಗೆ,</u>

1) ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ರಾಮನಗರ
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು-01

<u>ಪ್ರತಿ ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.